# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಳಗಾವಿ ಜಿಲ್ಲೆ, ಚಿಕ್ಕೋಡಿ ತಾಲ್ಲೂಕಿನ ಬೋರಗಾಂವ ಮತ್ತು ಕೊಗನೊಳ್ಳಿ ಗ್ರಾಮದ ಕುಡಿಯುವ ನೀರಿನ ನೀರು ಶುದ್ಧೀಕರಣ ಘಟಕಗಳ ದುರಸ್ಥಿಗಾಗಿ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: ಅಧೀಕ್ಷಕ ಇಂಜಿನಿಯರ್, ಪಂ.ರಾಜ್ ಇಂಜಿನಿಯರಿಂಗ್ ವೃತ್ತ, ಬೆಳಗಾವಿರವರ ಪತ್ರ ಸಂಖ್ಯೆ:ಪಂರಾಇಂವೃ/ಬೆ/ಸಇಂ-1/ಕುನೀಸ/2013-14/2966 ದಿನಾಂಕ:08.11.2013.

-

**ಪೀಠಿಕೆ:**

ಬೆಳಗಾವಿ ಜಿಲ್ಲೆ, ಚಿಕ್ಕೋಡಿ ತಾಲ್ಲೂಕಿನ ಬೋರಗಾಂವ ಮತ್ತು ಕೊಗನೊಳ್ಳಿ ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆಗಳಿಂದ ನೀರು ಫಿಲ್ಟರ್ ಆಗದಿರುವುದರಿಂದ ಕಲುಷಿತ ನೀರು ಸೇವನೆ ಮಾಡಿ ಗ್ರಾಮಸ್ಥರು ಅನಾರೋಗ್ಯಕ್ಕೆ ತುತ್ತಾಗಿರುತ್ತಾರೆ. ಆದ್ದರಿಂದ ಸದರಿ ಗ್ರಾಮಗಳ ನೀರು ಶುದ್ಧೀಕರಣ ಘಟಕಗಳ ಫಿಲ್ಟರ್ ಮರಳನ್ನು ಬದಲಾವಣೆ ಮಾಡುವುದು ಅಗತ್ಯವಾಗಿರುವುದರಿಂದ, ಬೋರಗಾಂವ ಮತ್ತು ಕೊಗನೊಳ್ಳಿ ಗ್ರಾಮಗಳ ಕ್ರಮವಾಗಿ **ರೂ.12.00ಲಕ್ಷ** ಮತ್ತು **ರೂ.10.00ಲಕ್ಷ** ಅಂದಾಜಿನಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ತುರ್ತಾಗಿ ಮರಳನ್ನು ಬದಲಾಯಿಸುವ / ದುರಸ್ತಿ ಮಾಡುವ ಕಾಮಗಾರಿಗೆ ಅನುಮೋದನೆ ನೀಡುವಂತೆ ಮೇಲೆ ಓದಲಾದ ಪತ್ರದಲ್ಲಿ ಅಧೀಕ್ಷಕ ಅಭಿಯಂತರರು, PRE ವೃತ್ತ, ಬೆಳಗಾಂ ರವರು ಕೋರಿರುತ್ತಾರೆ. ತುರ್ತು ಹಾಗೂ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಸಲುವಾಗಿ ಪ್ರಸ್ತಾವನೆಯನ್ನು ಸರ್ಕಾರವು ಒಪ್ಪಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 211 ಗ್ರಾನೀಸ (5) 2013 ಬೆಂಗಳೂರು, ದಿನಾಂಕ:28.11.2013**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಬೆಳಗಾವಿ ಜಿಲ್ಲೆ, ಚಿಕ್ಕೋಡಿ ತಾಲ್ಲೂಕಿನ ಬೋರಾಗಾಂವ ಗ್ರಾಮದ **ರೂ.12.00ಲಕ್ಷ** (ಹನ್ನೆರಡು ಲಕ್ಷ ರೂಪಾಯಿಗಳು ಮಾತ್ರ) ಮತ್ತು ಕೊಗನೊಳ್ಳಿ ಗ್ರಾಮದ ರೂ.10.00ಲಕ್ಷ (ಹತ್ತು ಲಕ್ಷ ರೂಪಾಯಿಗಳು ಮಾತ್ರ) ಅಂದಾಜಿನ ಜಲ ಶುದ್ಧಿಕರಣ ಘಟಕಗಳಲ್ಲಿನ ಮರಳನ್ನು ಬದಲಾಯಿಸಿ ದುರಸ್ಥಿಗೊಳಿಸುವ ಕಾಮಗಾರಿಗೆ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಬಾಬ್ತಿನ ವೆಚ್ಚವನ್ನು ಬೆಳಗಾಂ ಜಿಲ್ಲಾ ಪಂಚಾಯಿತಿಯಲ್ಲಿ 2013-14ರ ಸಾಲಿಗೆ NRDWP (C&Q) ಘಟಕದಡಿ ಲಭ್ಯವಿರುವ ಅನುದಾನದ ವತಿಯಿಂದ ಭರಿಸತಕ್ಕದ್ದು.

3. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ IFA ರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ 58 ಎಎಫ್ಎನ್ 2012 ದಿ:01.04.2013ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
ಇಮೇಲ್: rk3452000@yahoo.co.in
ಫೋನ್:22032806, ಫ್ಯಾಕ್ಸ್:22203175

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು

4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು-1)ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು-1
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ ಬೆಂ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂ
9. ವಿಶೇಷಾಧಿಕಾರಿಗಳು(ಜಿಪಂ)ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ ಬೆಂ.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
11. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, 2ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ ಆನಂದರಾವ್ ವೃತ್ತ ಬೆಂಗಳೂರು-09.
12. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಬೆಳಗಾಂ.**
13. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, **ಬೆಳಗಾಂ.**
14. ಅಧೀಕ್ಷಕ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಕಛೇರಿ, **ಬೆಳಗಾಂ.**
15. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕೋಡಿ, **ಬೆಳಗಾಂ ಜಿಲ್ಲೆ.**
16. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED, ಬೆಂಗಳೂರು-20
17. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
18. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ
19. ನಿರ್ದೇಶಕರು KRWSSA ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿಗಳು / ಅಪರ ನಿರ್ದೇಶಕರು, (ಆರ್ಥಿಕ) KRWSSA/SWSM/ ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ, ಇವರುಗಳ ಆಪ್ತ ಸಹಾಯಕರು
20. ಮ್ಯಾನೇಜರ್ ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂರಸ್ತೆ, ಬೆಂಗಳೂರು
21. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು
22. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5ಪ್ರತಿಗಳು)
23. ರಾಜ್ಯ ಪತ್ರಾಗಾರ ಇಲಾಖೆ(ಬಿಡಿ ಪ್ರತಿ ಶಾಖೆ).
24. ಗ್ರಾ.ಅ.ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ-10ಪ್ರತಿಗಳು.
25. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.